# ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 333/1, ಮೊದಲನೇ ಮಹಡಿ, ವಿ.ಜೆ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562110
ದೂ. : 080-29566001, 080-27682035 ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.tpa.gov.in


ಸಂ. ಬಿಐಎಪಿಎ/ಟಿಪಿ02/ಎಲ್‌ಎಒ/ಏನಿ/ಸಿಸಿ/13/2019-20 |1518 ದಿನಾಂಕ: 2 FEB 2021

## "ಪ್ರಾರಂಭಿಕ ಪ್ರಮಾಣ ಪತ್ರ"

(ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 15(1) ರನ್ವಯ)
(ಕರ್ನಾಟಕ ನಗರ ಯೋಜನಾ ಪ್ರಾಧಿಕಾರಗಳ ನಿಯಮಗಳ 1965 ರ ನಿಯಮ 30 ನಮೂನೆ 3 ರನ್ವಯ)

ವಿಷಯ: ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತ ರವರಿಂದ "1 ಲಕ್ಷ ಬಹುಮಹಡಿ ಬೆಂಗಳೂರು ವಸತಿ ಯೋಜನೆ"ಯಡಿ ಯಲಹಂಕ ತಾಲ್ಲೂಕು, ಜಾಲ ಹೋಬಳಿ, ನವರತ್ನ ಅಗ್ರಹಾರ ಗ್ರಾಮದ ಸ.ನಂ. 14 ರಲ್ಲಿ 1ಎ-01.08ಗು ಸ್ಥಳದಲ್ಲಿ ಲಭ್ಯವಿರುವ 3988.42 ಚ.ಮೀ ವಿಸ್ತೀರ್ಣ ಪ್ರದೇಶಕ್ಕೆ ಪ್ರಾಧಿಕಾರದಿಂದ ಅನುಮೋದನೆ ನೀಡಲಾಗಿರುವ ಏಕ ನಿವೇಶನ ವಿನ್ಯಾಸದಲ್ಲಿ ವಾಸದ ಉದ್ದೇಶಕ್ಕಾಗಿ ಕಟ್ಟಡ ನಿರ್ಮಿಸಲು ಪ್ರಾಧಿಕಾರದಿಂದ ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡುವ ಬಗ್ಗೆ.

1759

ಉಲ್ಲೇಖ:
1) ಮುಖ್ಯ ಅಭಿಯಂತರರು, ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತ ರವರ ಪತ್ರ ಸಂಖ್ಯೆ: ಆರ್.ಜಿ.ಹೆಚ್.ಸಿ.ಎಲ್ 94 ಓಎಲ್‌ಹೆಚ್ ಟಿಇಸಿಹೆಚ್ 01/2019-20 ದಿನಾಂಕ: 10/02/2020.
2) ದಿನಾಂಕ: 24/02/2020 ರಂದು ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆ.
3) ಸರ್ಕಾರದ ಅಧಿಸೂಚನೆ ಸಂ. ಯುಡಿಡಿ 10 ಟಿಟಿಪಿ 2018, ದಿನಾಂಕ: 04/05/2020.
4) ಸರ್ಕಾರದ ಆದೇಶ ಪತ್ರ ಸಂಖ್ಯೆ:ನಅಇ70ಬೆಮಪ್ರ2020(ಇ) ಬೆಂಗಳೂರು ದಿನಾಂಕ: 02/06/2020.
5) ದಿನಾಂಕ: 18/06/2020 ರಂದು ನಡೆದ ಪ್ರಾಧಿಕಾರದ 129 ನೇ ಸಭೆಯ ವಿಷಯ ಸಂ. 129.52 ರ ನಡಾವಳಿ.
6) ಈ ಪ್ರಾಧಿಕಾರದಿಂದ ವಸತಿ ಉಪಯೋಗದ ಏಕ ನಿವೇಶನ ವಿನ್ಯಾಸ ನಕ್ಷೆಗೆ ಅನುಮೋದನೆ ಆದೇಶದ ಸಮ ಸಂಖ್ಯೆಯ ಪತ್ರ ದಿನಾಂಕ: 04/01/2021.
7) ಕಟ್ಟಡ ನಕ್ಷೆಯ ನೀಲಿ ಪ್ರತಿಗಳನ್ನು ಸಲ್ಲಿಸಿದ ದಿನಾಂಕ: 04/01/2021.

EE-I for 04/02/21

Sri Arunkumar AE
Forward approved copy to the agency

*****************

ಮುಖ್ಯ ಅಭಿಯಂತರರು, ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತ ಇವರು ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತ ರವರಿಂದ "1 ಲಕ್ಷ ಬಹುಮಹಡಿ ಬೆಂಗಳೂರು ವಸತಿ ಯೋಜನೆ"ಯಡಿ ಯಲಹಂಕ ತಾಲ್ಲೂಕು, ಜಾಲ ಹೋಬಳಿ, ನವರತ್ನ ಅಗ್ರಹಾರ ಗ್ರಾಮದ ಸ.ನಂ. 14 ರಲ್ಲಿ 1ಎ-01.08ಗು ಸ್ಥಳದಲ್ಲಿ ಲಭ್ಯವಿರುವ 3988.42 ಚ.ಮೀ ವಿಸ್ತೀರ್ಣ ಪ್ರದೇಶದಲ್ಲಿ ವಸತಿ ಉಪಯೋಗದ ಏಕ ನಿವೇಶನ ವಿನ್ಯಾಸ ನಕ್ಷೆಗೆ ಅನುಮೋದನೆ / ಕಟ್ಟಡ ನಿರ್ಮಿಸಲು ಪ್ರಾಧಿಕಾರದಿಂದ ಪ್ರಾರಂಭಿಕ ಪ್ರಮಾಣ ಪತ್ರ ನೀಡಲು ಕೋರಲಾಗಿರುತ್ತದೆ.

ಉಲ್ಲೇಖ (2) ರಲ್ಲಿನ ಸಭೆಯಲ್ಲಿ ಉದ್ದೇಶಿತ ಕಟ್ಟಡ ನಿರ್ಮಾಣ ಪೂರ್ವದಲ್ಲಿ ವಿವಿಧ ಇಲಾಖೆ / ಮಂಡಳಿ / ನಿಗಮಗಳ ಅಗತ್ಯ ನಿರಾಕ್ಷೇಪಣಾ ಪತ್ರಗಳನ್ನು ಪಡೆಯುವ ಷರತ್ತಿಗೊಳಪಟ್ಟು ಪ್ರಸ್ತಾವನೆಯನ್ನು ಪರಿಗಣಿಸಲು ತೀರ್ಮಾನಿಸಲಾಗಿರುತ್ತದೆ.

ಉಲ್ಲೇಖ (3) ರ ಸರ್ಕಾರದ ಅಧಿಸೂಚನೆಯಲ್ಲಿ ಸ್ಥಳೀಯ ಯೋಜನಾ ಪ್ರದೇಶಗಳ ಮಹಾಯೋಜನೆಗಳ ವಲಯ ನಿಯಮಾವಳಿಗಳಿಗೆ ತಿದ್ದುಪಡಿ ಮಾಡಲಾಗಿದ್ದು, ರಾಜೀವ್‌ಗಾಂಧಿ ವಸತಿ ನಿಗಮ ನಿಯಮಿತ ವತಿಯಿಂದ ಕೈಗೊಂಡಿರುವ " ಒಂದು ಲಕ್ಷ ಬಹುಮಹಡಿ ವಸತಿ ಯೋಜನೆ" ಹಾಗೂ ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿಯು ಕೈಗೊಳ್ಳುವ

ಸ್ಥಳದಲ್ಲಿ / ಮನಃ ವಸತಿ ಯೋಜನೆಗಳಿಗೆ Stilt Floor, Road width, FAR, car parking, corridors ಅಂಶಗಳಿಗೆ ಹೆಚ್ಚಿನ ವಿನಾಯಿತಿ ನೀಡಿ ತಿದ್ದುಪಡಿ ಮಾಡಲಾಗಿರುತ್ತದೆ ಹಾಗೂ ಕ್ರಮ ಸಂ (6) ರಲ್ಲಿ ಈ ಕೆಳಕಂಡಂತೆ ಅವಕಾಶ ಮಾಡಲಾಗಿರುತ್ತದೆ.

"One lakhs multi-storied housing scheme" taken up by Rajiv Gandhi Housing Corporation Ltd. shall be permitted under special circumstances in all land use zones, subject to incorporation of roads proposed in the Master Plan.

ಉಲ್ಲೇಖ (4) ರ ಸರ್ಕಾರದ ಪತ್ರ ಸಂಖ್ಯೆ: ನಅಇ 70 ಬೆಮಪ್ರಾ 2020 (ಇ) ದಿನಾಂಕ: 02/06/2020 ರಲ್ಲಿ ರಾಜೀವ್ ಗಾಂಧಿ ವಸತಿ ನಿಗಮದಿಂದ "1 ಲಕ್ಷ ಬಹುಮಹಡಿ ಬೆಂಗಳೂರು ವಸತಿ ಯೋಜನೆ' ಅಡಿಯಲ್ಲಿ ಬೆಂಗಳೂರು ನಗರ ಜಿಲ್ಲಾ ವ್ಯಾಪ್ತಿಯಲ್ಲಿ ನಿರ್ಮಿಸಲಾಗುವ ವಸತಿ ಯೋಜನೆಗಳಿಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 18(1) ರ ಅಡಿಯಲ್ಲಿ ವಿಧಿಸುವ ಶುಲ್ಕಗಳಿಗೆ ಅದೇ ಕಾಯ್ದೆಯ ಕಲಂ 18(3) ರಡಿಯಲ್ಲಿ ಕಲ್ಪಿಸಿರುವ ಅವಕಾಶದಂತೆ ವಿನಾಯಿತಿ ನೀಡಲು ಮತ್ತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 18–ಎ ರಡಿ ವಿಧಿಸುವ ಕರ/ಉಪ ಕರಗಳಿಗೆ ಅದೇ ಕಾಯ್ದೆಯ ಕಲಂ 18–ಎ(5) ರಡಿಯಲ್ಲಿ ಕಲ್ಪಿಸಿರುವ ಅವಕಾಶದಂತೆ ವಿನಾಯಿತಿ ನೀಡಲು ಸರ್ಕಾರದ ಅನುಮೋದನೆ ನೀಡಿರುತ್ತದೆ.

ಉಲ್ಲೇಖ (5) ರಲ್ಲಿನ ದಿನಾಂಕ: 18/06/2020 ರಂದು ನಡೆದ ಪ್ರಾಧಿಕಾರದ 129 ನೇ ಸಭೆಯ ವಿಷಯ ಸಂ. 129.52 ರ ನಡಾವಳಿಯಲ್ಲಿ ವಲಯ ನಿಯಮಾವಳಿಗಳಿಗೆ ಅನುಗುಣವಾಗಿ ಏಕನಿವೇಶನ ವಿನ್ಯಾಸ ನಕ್ಷೆ / ಕಟ್ಟಡ ನಕ್ಷೆಯನ್ನು ಪಡೆದುಕೊಂಡು "1 ಲಕ್ಷ ಬಹುಮಹಡಿ ಬೆಂಗಳೂರು ವಸತಿ ಯೋಜನೆ'ಯಡಿ ಯಲಹಂಕ ತಾಲ್ಲೂಕು, ಜಾಲ ಹೋಬಳಿ, ನವರತ್ನ ಅಗ್ರಹಾರ ಗ್ರಾಮದ ಸ.ನಂ. 14 ರಲ್ಲಿ 1ಎ–02ಗು ಹಾಗೂ ಕುದುರೆಗೆರೆ ಗ್ರಾಮದ ಸ.ನಂ. 55 ರಲ್ಲಿ 1ಎ–30ಗು ವಿಸ್ತೀರ್ಣ ಪ್ರದೇಶಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 15 ರ ಅಡಿಯಲ್ಲಿ ವಸತಿ ಉದ್ದೇಶದ ಏಕ ನಿವೇಶನ ವಿನ್ಯಾಸ ನಕ್ಷೆ/ಕಟ್ಟಡ ನಕ್ಷೆಯನ್ನು ಅನುಮೋದಿಸಲು ತೀರ್ಮಾನಿಸಲಾಗಿರುತ್ತದೆ. ಪ್ರಾಧಿಕಾರದ ಸಭೆಯ ನಡಾವಳಿಯ ರೀತ್ಯ ಉಲ್ಲೇಖ (6) ರಂತೆ ವಸತಿ ಉಪಯೋಗದ ಏಕ ನಿವೇಶನ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಲಾಗಿರುತ್ತದೆ.

ಅರ್ಜಿದಾರರು ಉಲ್ಲೇಖ (7) ರಲ್ಲಿ ವಸತಿ ಉಪಯೋಗದ ಏಕ ನಿವೇಶನ ವಿನ್ಯಾಸದಲ್ಲಿ ಕಟ್ಟಡ ಕಟ್ಟುವ ಸಂಬಂಧ ಕಟ್ಟಡ ನಕ್ಷೆಯ ನೀಲಿ ಪ್ರತಿಗಳನ್ನು ಸಲ್ಲಿಸಿರುವುದರಿಂದ ಪ್ರಾಧಿಕಾರದ ಸಭೆಯ ನಡಾವಳಿಯ ರೀತ್ಯ ಹಾಗೂ ಉಲ್ಲೇಖ (2) ರ ಸಭೆಯಲ್ಲಿ ಸೂಚಿಸಿರುವ ಮೇರೆಗೆ ವಿವಿಧ ಇಲಾಖೆ / ಮಂಡಳಿ / ನಿಗಮಗಳ ಅಗತ್ಯ ನಿರಾಕ್ಷೇಪಣಾ ಪತ್ರಗಳನ್ನು ಉದ್ದೇಶಿತ ನಿರ್ಮಾಣ ಪೂರ್ವದಲ್ಲಿ ಪಡೆಯುವ ಷರತ್ತಿಗೊಳಪಟ್ಟು ಯಲಹಂಕ ತಾಲ್ಲೂಕು, ಜಾಲ ಹೋಬಳಿ, ನವರತ್ನ ಅಗ್ರಹಾರ ಗ್ರಾಮದ ಸ.ನಂ. 14 ರಲ್ಲಿ 1ಎ–01.08ಗು ಸ್ಥಳದಲ್ಲಿ ಲಭ್ಯವಿರುವ 3988.42 ಚ.ಮೀ ವಿಸ್ತೀರ್ಣ ಪ್ರದೇಶಕ್ಕೆ ಪ್ರಾಧಿಕಾರದಿಂದ ಅನುಮೋದನೆ ನೀಡಲಾಗಿರುವ ಏಕ ನಿವೇಶನ ವಿನ್ಯಾಸದಲ್ಲಿ ವಸತಿ ಉಪಯೋಗದ ಸ್ಟಿಲ್ಟ್ + 7 ಮೇಲಿನ ಅಂತಸ್ತು (Stilt + 07UF) ಮಹಡಿ ಒಳಗೊಂಡ 140 ವಸತಿ ಘಟಕಗಳಿಗೆ ಕಟ್ಟಡ ನಿರ್ಮಾಣ ಸಂಬಂಧ ಈ ಕೆಳಕಂಡ ಷರತ್ತಿಗಳಿಗೊಳಪಟ್ಟು ಪ್ರಾರಂಭಿಕ ಪ್ರಮಾಣ ಪತ್ರವನ್ನು ನೀಡಲಾಗಿದೆ.

**<u>ಷರತ್ತುಗಳು:</u>**

1. ಯೋಜಿಸಿರುವ ಕಟ್ಟಡವನ್ನು ವಸತಿ ಉದ್ದೇಶಕ್ಕಾಗಿಯೇ ಉಪಯೋಗಿಸಬೇಕು.
2. ಈ ಪ್ರಾರಂಭಿಕ ಪ್ರಮಾಣ ಪತ್ರವನ್ನು ಎರಡು ವರ್ಷದ ಅವಧಿಗೆ ಅಂದರೆ ದಿನಾಂಕ: **02/02/2021** ರಿಂದ **01/02/2023** ರವರೆಗೆ ಮಾತ್ರ ನೀಡಲಾಗಿರುತ್ತದೆ.
3. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮದ ಪ್ರಕಾರ ಇದು ಪ್ರಾರಂಭಿಕ ಪ್ರಮಾಣ ಪತ್ರವಾಗಿದ್ದು, ಈ ಪತ್ರದ ಅಧಾರದ ಮೇಲೆ ಅವಶ್ಯಕ ಇತರೆ ಪರವಾನಿಗೆಯನ್ನು **ದೊಡ್ಡಜಾಲ** ಗ್ರಾಮ ಪಂಚಾಯ್ತಿರವರಿಂದ ಪಡೆಯದೇ ಅಭಿವೃದ್ಧಿ ಕಾರ್ಯ ಕೈಗೊಳ್ಳಬಾರದು.

ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 333/1, ಮೊದಲನೇ ಮಹಡಿ, ವಿ.ಜೆ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562110
ದೂ. : 080-29566001, 080-27682035 ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.tpa.gov.in

4. ಕಟ್ಟಡ ಕಟ್ಟುವ ಪೂರ್ವದಲ್ಲಿ **ದೊಡ್ಡಜಾಲ** ಗ್ರಾಮ ಪಂಚಾಯಿತಿಯಿಂದ ಖಾತಾ ನೋಂದಣಿ ಮಾಡಿಕೊಂಡು ಕಟ್ಟಡ ಪರವಾನಿಗೆಯನ್ನು ಪಡೆಯಬೇಕು.

5. ಕಟ್ಟಡವನ್ನು ಹಾಲಿ ಇರುವ ವಲಯ ನಿಯಮಾವಳಿ ಹಾಗೂ ಕಟ್ಟಡದ ವಿಧಿಯ ಪ್ರಕಾರ ಕಟ್ಟಬೇಕು. ಎಲ್ಲಾ ಅಭಿವೃದ್ಧಿ ಕಾರ್ಯಗಳನ್ನು ಈ ಪ್ರಾರಂಭಿಕ ಪ್ರಮಾಣ ಪತ್ರದ ಮೂಲಕ ಅನುಮೋದಿಸಿರುವ ನಕ್ಷೆಯಂತೆಯೇ ಕೈಗೊಳ್ಳಬೇಕು. ಬೆಳವಣಿಗೆಯಲ್ಲಿನ ಯಾವುದೇ ಬದಲಾವಣೆಯನ್ನು ಈ ಕಛೇರಿಯ ಪೂರ್ವಾನುಮತಿ ಪಡೆಯದೇ ಮಾಡತಕ್ಕದ್ದಲ್ಲ.

6. ವಸತಿ ಉಪಯೋಗಕ್ಕೆ ಕಟ್ಟಡ ಕಟ್ಟಲು ನಕ್ಷೆಯಲ್ಲಿ ಬಿಟ್ಟಿರುವಂತೆ ನಡುಜಾಗವನ್ನು ಬಿಟ್ಟು ಕಟ್ಟಡ ಕಟ್ಟತಕ್ಕದ್ದು.

7. ಕಟ್ಟಡದ ಮತ್ತು ಯಾವುದೇ ಅಭಿವೃದ್ಧಿಯ ತಳಪಾಯ, ಅಗ್ನಿಶಾಮಕ ವ್ಯವಸ್ಥೆ ಹಾಗೂ ಇತರ ಭದ್ರತಾ ವ್ಯವಸ್ಥೆಗಳು ಅರ್ಜಿದಾರರ ಸಂಪೂರ್ಣ ಜವಾಬ್ದಾರಿಯಾಗಿರುತ್ತದೆ. ಈ ಸಂಬಂಧ ಯಾವುದೇ ಅನಾಹುತಗಳಿಗೆ ಈ ಪ್ರಮಾಣ ಪತ್ರ ಬದ್ಧವಲ್ಲ ಹಾಗೂ ಪ್ರಾಧಿಕಾರವು ಜವಾಬ್ದಾರರಾಗುವುದಿಲ್ಲ.

8. ಕಟ್ಟಡ ಭದ್ರತೆಯ ಕುರಿತು ನುರಿತ (Structural Engineer) ತಜ್ಞರಿಂದ Structural Details ಪಡೆದು ಅದರಂತೆ ನಿರ್ವಹಿಸುವುದು ಹಾಗೂ ಅವಶ್ಯಕ ಮುಂಜಾಗ್ರತೆಗಳನ್ನು ಕೈಗೊಳ್ಳತಕ್ಕದ್ದು. ಈ ಕುರಿತು ಪ್ರಾಧಿಕಾರಕ್ಕೆ ಯಾವುದೇ ಜವಾಬ್ದಾರಿ ಇರುವುದಿಲ್ಲ.

9. ಯಲಹಂಕ ವಾಯುಸೇನಾ ವಿಮಾನ ನಿಲ್ದಾಣದಿಂದ 10ಕಿ.ಮೀ ಅಂತರದ ಒಳಗೆ ಇರುವುದರಿಂದ ಏರ್‌ಫೋರ್ಸ್ ವತಿಯಿಂದ ನಿರಾಕ್ಷೇಪಣಾ ಪತ್ರ ಪಡೆಯುವ ಷರತ್ತಿಗೊಳಪಟ್ಟಿರುತ್ತದೆ.

10. ಪ್ರಸ್ತಾವಿತ ಕಟ್ಟಡದ ಎತ್ತರದ ಸಂಬಂಧ ಏರ್‌ಪೋರ್ಟ್ ಅಥಾರಿಟಿ ಆಫ್ ಇಂಡಿಯಾ ವತಿಯಿಂದ ನಿರಾಕ್ಷೇಪಣಾ ಪತ್ರ ಪಡೆಯುವ ಷರತ್ತಿಗೊಳಪಟ್ಟಿರುತ್ತದೆ.

11. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ವತಿಯಿಂದ ನಿರಾಕ್ಷೇಪಣಾ ಪತ್ರ ಪಡೆಯುವ ಷರತ್ತಿಗೊಳಪಟ್ಟಿರುತ್ತದೆ.

12. ಕರ್ನಾಟಕ ಅಗ್ನಿಶಾಮಕ ಇಲಾಖೆ ವತಿಯಿಂದ ನಿರಾಕ್ಷೇಪಣಾ ಪತ್ರ ಪಡೆಯುವ ಷರತ್ತಿಗೊಳಪಟ್ಟಿರುತ್ತದೆ.

13. ಬೆಂಗಳೂರು ವಿದ್ಯುತ್ ಸರಬರಾಜು ನಿಗಮ ನಿಯಮಿತ ವತಿಯಿಂದ ನಿರಾಕ್ಷೇಪಣಾ ಪತ್ರ ಪಡೆಯುವ ಷರತ್ತಿಗೊಳಪಟ್ಟಿರುತ್ತದೆ.

14. ಬಿ.ಎಸ್.ಎನ್.ಎಲ್ ರವರರಿಂದ ವತಿಯಿಂದ ನಿರಾಕ್ಷೇಪಣಾ ಪತ್ರ ಪಡೆಯುವ ಷರತ್ತಿಗೊಳಪಟ್ಟಿರುತ್ತದೆ.

15. ರಿಯಲ್ ಎಸ್ಟೇಟ್ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ-2016 ರ ಕಲಂ (3) ಮತ್ತು (4) ರ ರೀತ್ಯ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ (RERA) ದಲ್ಲಿ ವಸತಿ ಯೋಜನೆಯ ಪೂರ್ವಭಾವಿ ನೋಂದಣಿಯನ್ನು ಕಡ್ಡಾಯವಾಗಿ ಮಾಡತಕ್ಕದ್ದು.

16. ಕಾಮಗಾರಿಗಳಿಂದಾಗಿ ಪರಿಸರವು ಮಾಲಿನ್ಯವಾಗದಂತೆ ಎಚ್ಚರಿಕೆ ವಹಿಸತಕ್ಕದ್ದು ಮತ್ತು ಸ್ವಾಭಾವಿಕ ಮಳೆಯ ನೀರು ಇಂಗಿ ಹೋಗಲು ವ್ಯವಸ್ಥೆ (Rain Water harvesting) ಯನ್ನು ಮಾಡತಕ್ಕದ್ದು ಮತ್ತು ಸೌರಶಕ್ತಿ ವ್ಯವಸ್ಥೆಯನ್ನು ಕಟ್ಟಡದಲ್ಲಿ ಒದಗಿಸತಕ್ಕದ್ದು ಹಾಗೂ ಸಾಧ್ಯವಾದಷ್ಟು ಮಟ್ಟಿಗೆ ನಿವೇಶನದ ಮುಂಭಾಗದಲ್ಲಿ ಗಿಡ/ಮರವನ್ನು ಬೆಳೆಸತಕ್ಕದ್ದು.

17. ಈ ಪ್ರಮಾಣ ಪತ್ರ ನೀಡಿರುವ ಮಾತ್ರಕ್ಕೆ ಯಾವುದೇ ಸೌಲಭ್ಯವನ್ನು ಅರ್ಜಿದಾರರಿಗೆ ನೀಡುವ ಹೊಣೆಗಾರಿಕೆ ಪ್ರಾಧಿಕಾರಕ್ಕಿರುವುದಿಲ್ಲ.

18. ಈ ಪ್ರಾರಂಭಿಕ ಪ್ರಮಾಣ ಪತ್ರದೊಡನೆ ಅನುಮೋದಿಸಲ್ಪಟ್ಟಿರುವ ನಕ್ಷೆಯನ್ನು ಕಟ್ಟಡ ನಿರ್ಮಾಣ ಸ್ಥಳದಲ್ಲಿ ಕಡ್ಡಾಯವಾಗಿ ಪ್ರದರ್ಶಿಸತಕ್ಕದ್ದು.

19. ಬಾಲ ಕಾರ್ಮಿಕರನ್ನು ನೇಮಿಸಿಕೊಳ್ಳಬಾರದು.

20. ಈ ಪ್ರಾಧಿಕಾರದ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು ಹಾಗೂ ಸಂಪರ್ಕ ರಸ್ತೆಯ ಬಗ್ಗೆ ಯಾವುದೇ ತಕರಾರು ಬಂದರೂ ಈ ಪ್ರಾಧಿಕಾರವು ಹೊಣೆಯಲ್ಲ ಮತ್ತು ನೀವೇ ಸ್ವಂತ ಜವಾಬ್ದಾರಿಯಿಂದ ಬಗೆಹರಿಸಿಕೊಳ್ಳತಕ್ಕದ್ದು.

21. ಈ ಅನುಮತಿಯನ್ನು ಉಲ್ಲಂಘಿಸಿ ಅಭಿವೃದ್ಧಿಯನ್ನು ಕೈಗೊಂಡರೆ ಅಥವಾ ನೀಡಿರುವ ಮಾಹಿತಿಗಳು ದೋಷಪೂರ್ಣವಾಗಿದ್ದರೆ ಅನುಮತಿಯನ್ನು ಹಿಂತೆಗೆದುಕೊಳ್ಳಲಾಗುವುದಲ್ಲದೇ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಅನ್ವಯ ಕ್ರಮ ತೆಗೆದುಕೊಳ್ಳಲಾಗುವುದು.

22. ಅಂತರಾಷ್ಟ್ರೀಯ ವಾಯು ನೆಲೆಯ ಪರಿಸರದಲ್ಲಿ ಬರುವುದರಿಂದ ಶಬ್ದಮಾಲಿನ್ಯ ಸಹಿಸಿಕೊಳ್ಳುವ ಷರತ್ತಿಗೊಳಪಟ್ಟಿರುತ್ತದೆ.

23. ಇತರೆ ಸಂಬಂಧಪಟ್ಟ ಇಲಾಖೆಗಳಿಂದ ಅಗತ್ಯವಿರುವ ಅನುಮತಿ/ನಿರಾಕ್ಷೇಪಣಾ ಪತ್ರಗಳನ್ನು ಸಹ ಪಡೆಯತಕ್ಕದ್ದು.

24. ಅರ್ಜಿದಾರರು ಸಲ್ಲಿಸಿರುವ ಮಾಹಿತಿ/ದಾಖಲಾತಿಗಳು ಸುಳ್ಳು ಅಥವಾ ಪೋರ್ಜರಿಗಳಾಗಿದ್ದರೆ ಈ ಕಛೇರಿಯಿಂದ ನೀಡಿರುವ ಪ್ರಾರಂಭಿಕ ಪ್ರಮಾಣ ಪತ್ರವು ತಂತಾನೆ ರದ್ದಾಗುತ್ತದೆ.

2.2.21

**ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು ಹಾಗೂ**
**ಸದಸ್ಯ ಕಾರ್ಯದರ್ಶಿಗಳು,**
ಬೆಂಗಳೂರು ಅಂತರಾಷ್ಟ್ರೀಯ ವಿಮಾನ
ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ,
ದೇವನಹಳ್ಳಿ

*ಇವರಿಗೆ:*

**ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳು,**
**ದೊಡ್ಡಜಾಲ** ಗ್ರಾಮ ಪಂಚಾಯ್ತಿ,
ಜಾಲ ಹೋಬಳಿ, ಯಲಹಂಕ ತಾಲ್ಲೂಕು
ಬೆಂಗಳೂರು ನಗರ ಜಿಲ್ಲೆ.
} ಕಟ್ಟಡ ನಕ್ಷೆಯ 4 ಪ್ರತಿಗಳೊಂದಿಗೆ ಮುಂದಿನ ಕ್ರಮಕ್ಕಾಗಿ ರವಾನಿಸಲಾಗಿದೆ.

ಪ್ರತಿಯನ್ನು:

1. ಮುಖ್ಯ ಅಭಿಯಂತರರು, ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತ, ಕಾವೇರಿ ಭವನ, 9ನೇ ಮಹಡಿ, ಇ ಮತ್ತು ಎಫ್ ಬ್ಲಾಕ್, ಕೆಂಪೇಗೌಡ ರಸ್ತೆ, ಬೆಂಗಳೂರು-560009 ರವರ ಮಾಹಿತಿಗಾಗಿ.
2. ಕಾರ್ಯದರ್ಶಿ, ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ, ನಂ. 1/14, 2 ನೇ ಮಹಡಿ, ಸಿಲ್ವರ್ ಜ್ಯೂಬಿಲಿ ಬ್ಲಾಕ್, ಯುನಿಟಿ ಬಿಲ್ಡಿಂಗ್, ಸಿ.ಎಸ್.ಐ ಕಾಂಪೌಂಡ್, 3 ನೇ ಕ್ರಾಸ್ ಮಿಷನ್ ರಸ್ತೆ, ಬೆಂಗಳೂರು-560027 ಇವರ ಮಾಹಿತಿಗಾಗಿ ಕಳುಹಿಸಿದೆ.
3. ಕಛೇರಿ ಪ್ರತಿ.